# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 697
ಮಾನ್ಯ ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 12.12.2025
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು; ಮಾಹಿತಿ ನೀಡುವುದು; ಪ್ರಸ್ತುತ ವಸತಿ ಶಾಲೆಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು: ಶಿಥಿಲಾವಸ್ಥೆಯಲ್ಲಿರುವ ಹಾಸ್ಟೆಲ್ ಕಟ್ಟಡಗಳ ಸಂಖ್ಯೆ ಎಷ್ಟು: (ಸಂಪೂರ್ಣ ಮಾಹಿತಿ ನೀಡುವುದು) | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 67 ಡಾ.ಬಿ.ಆರ್.ಅಂಬೇಡ್ಕರ್ (1-5ನೇ ತರಗತಿ) ಸರ್ಕಾರಿ ವಸತಿ ಶಾಲೆಗಳನ್ನು ನಿರ್ವಹಿಸಲಾಗುತ್ತಿದ್ದು, 2025-26ನೇ ಸಾಲಿಗೆ 6694 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಕಲ್ಪಿಸಲಾಗಿರುತ್ತದೆ.<br>ಈ ವಿದ್ಯಾರ್ಥಿ ನಿಲಯಗಳ ಪೈಕಿ 15 ವಿದ್ಯಾರ್ಥಿ ನಿಲಯಗಳ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿರುವುದಾಗಿ ಲೋಕೋಪಯೋಗಿ ಇಲಾಖೆಯಿಂದ ವರದಿ ನೀಡಿದ್ದು, ಸದರಿ ಶಿಥಿಲಗೊಂಡ ಕಟ್ಟಡಗಳನ್ನು ನೆಲಸಮಗೊಳಿಸಿ ಹೊಸ ಕಟ್ಟಡ ನಿರ್ಮಾಣ ಮಾಡಲು ಕ್ರಮವಹಿಸಲಾಗುತ್ತಿದೆ.<br><br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ, ಪರಿಶಿಷ್ಟ ಜಾತಿ -539, ಪರಿಶಿಷ್ಟ ಪಂಗಡ-156 ಹಾಗೂ ಹಿಂದುಳಿದ ವರ್ಗ-179 ಒಟ್ಟು 874 ಮೊರಾರ್ಜಿ ದೇಸಾಯಿ/ ರಾಣಿ ಚೆನ್ನಮ್ಮ/ ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿವೆ. |

| ಕ್ರ. ಸಂ | ವರ್ಗ | ಒಟ್ಟು ಶಾಲೆಗಳು | ಸ್ವಂತ ಕಟ್ಟಡ ವಸತಿ ಶಾಲೆಗಳು | ಬಾಡಿಗೆ/ಬಾಡಿಗೆ ರಹಿತ ಕಟ್ಟಡದಲ್ಲಿನ ವಸತಿ ಶಾಲೆಗಳು | ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆ |
|---|---|---|---|---|---|
| 1 | **ಪರಿಶಿಷ್ಟ ಜಾತಿ ವಸತಿ ಶಾಲೆಗಳು** | **539** | 405 | 134 | 124158 |
| 2 | **ಪರಿಶಿಷ್ಟ ವರ್ಗದ ವಸತಿ ಶಾಲೆಗಳು** | **156** | 116 | 40 | 34894 |
| 3 | **ಹಿಂದುಳಿದ ವರ್ಗದ ವಸತಿ ಶಾಲೆಗಳು** | **179** | 141 | 38 | 41161 |
| | **ಒಟ್ಟು** | **874** | **662** | **212** | **200213** |

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಒಟ್ಟು 874 ವಸತಿ ಶಾಲೆ/ ಕಾಲೇಜುಗಳಲ್ಲಿ ಸ್ವಂತ ಕಟ್ಟಡದಲ್ಲಿರುವ 662 ವಸತಿ ಶಾಲೆಗಳ ಪೈಕಿ ಯಾವುದೇ ವಸತಿ ಶಾಲೆ/ ಕಾಲೇಜುಗಳು ಶಿಥಿಲಾವಸ್ಥೆಯಲ್ಲಿ ಇರುವುದಿಲ್ಲ.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಆ) | ಸದರಿ ವಸತಿ ಶಾಲೆಗಳಿಗೆ ಪಠ್ಯಪುಸ್ತಕಗಳನ್ನು ಹಾಗೂ ಇನ್ನಿತರ ವಿದ್ಯಾರ್ಥಿಗಳ ಉಪಯುಕ್ತ ವಸ್ತುಗಳನ್ನು ಸರಿಯಾದ ಸಮಯದಲ್ಲಿ ಸರಬರಾಜು ಮಾಡಲಾಗಿದೆಯೇ; ಮಾಡಿದ್ದಲ್ಲಿ, ದಾಖಲೆಗಳ ಸಮೇತ ಮಾಹಿತಿ ನೀಡುವುದು. ಇಲ್ಲದಿದ್ದಲ್ಲಿ ಯಾವ ಕಾರಣಕ್ಕಾಗಿ ವಿಳಂಬ | ಸದರಿ ವಸತಿ ಶಾಲೆಗಳಲ್ಲಿನ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕಗಳನ್ನು ಸರಬರಾಜು ಮಾಡಿ ಪೂರೈಸುವ ಸಂಬಂಧ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಕಾರ್ಯಾದೇಶ ದಿನಾಂಕ:27-02-2025ರಲ್ಲಿ ಕೆಟಿಪಿಪಿ ಅಧಿನಿಯಮದಡಿ ವಿನಾಯಿತಿ ಪಡೆದ ಮೇ\|\| ಎಂಎಸ್ಐಎಲ್ ಸಂಸ್ಥೆಯಿಂದ ಖರೀದಿಸಿ ಪೂರೈಸಲಾಗಿದೆ. ಅಂತೆಯೇ, ಸಮವಸ್ತ್ರವನ್ನು ಕೆಹೆಚ್‌ಡಿಸಿ ಸಂಸ್ಥೆಯಿಂದ ಶುಚಿ ಸಂಭ್ರಮ ಕಿಟ್‌ಗಳನ್ನು ಕೆಹೆಚ್‌ಡಿಎಲ್ ಸಂಸ್ಥೆಯಿಂದ ಹಾಗೂ ಶೂ ಮತ್ತು ಸಾಕ್ಸ್ ಗಳನ್ನು ಇ-ಟೆಂಡರ್ ಪ್ರಕ್ರಿಯೆ ಮೂಲಕ ಖರೀದಿ ನಿಗದಿತ ಸಮಯದಲ್ಲಿ ಪೂರೈಸಲು ಕ್ರಮವಹಿಸಲಾಗಿದೆ. |

ಮಾಡಲಾಗುತ್ತಿದೆ; ವಿಳಂಬ ಧೋರಣೆಯಿಂದ ಮಕ್ಕಳ ಶೈಕ್ಷಣಿಕ ಜೀವನಕ್ಕೆ ತೊಂದರೆ ಮಾಡಿದಂತಾಗುವುದಿಲ್ಲವೇ;

**ಇ)** ಸದರಿ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು; ಒಟ್ಟು ಎಷ್ಟು ಹುದ್ದೆಗಳು ಖಾಲಿಯಿವೆ; ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; ಸ್ವಂತ ಮತ್ತು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಸ್ವಂತ ಕಟ್ಟಡ ಹೊಂದಲು ಯಾವ ಕ್ರಮ ಕೈಗೊಳ್ಳಲಾಗಿದೆ; ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಸ್ಟೆಲ್‌ಗಳ ನಿರ್ವಹಣಾ ವೆಚ್ಚವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯಲ್ಲಿ 68 ವಸತಿ ಶಾಲೆಗಳಿದ್ದು ಸದರಿ ವಸತಿ ಶಾಲೆಗಳಿಗೆ ಸಂಬಂಧಿಸಿದಂತೆ ಮಂಜೂರಾಗಿರುವ ವಸತಿ ಶಾಲಾ ಶಿಕ್ಷಕರ ಹುದ್ದೆಗಳು:- 340 ಭರ್ತಿಯಾಗಿರುವ ಹುದ್ದೆಗಳು:- 133 ಒಟ್ಟು 207 ಹುದ್ದೆಗಳು ಖಾಲಿ ಇರುತ್ತದೆ. ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಖಾಲಿ ಇರುವ ಹುದ್ದೆಗಳಿಗೆ ಎದುರಾಗಿ-157 ಹುದ್ದೆಗಳಿಗೆ ಗೌರವಧನದ ಆಧಾರದ ಮೇಲೆ ಬೋಧಕ ಸಿಬ್ಬಂದಿ ಸೇವೆಯನ್ನು ಪಡೆಯಲಾಗಿದೆ.

ಮುಂದುವರೆದು, ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಒಟ್ಟು 1938 ಡಾ. ಬಿ. ಆರ್. ಅಂಬೇಡ್ಕರ್ ಸರ್ಕಾರಿ ವಿದ್ಯಾರ್ಥಿ ನಿಲಯಗಳನ್ನು ನಡೆಸಲಾಗುತ್ತಿದ್ದು, ಕಟ್ಟಡಗಳ ವಿವರ ಈ ಕೆಳಕಂಡಂತಿದೆ.

| ವಿದ್ಯಾರ್ಥಿ ನಿಲಯಗಳ ಸಂಖ್ಯೆ | ಸ್ವಂತ ಕಟ್ಟಡ | ಬಾಡಿಗೆ/ ಬಾಡಿಗೆ ರಹಿತ | ನಿರ್ಮಾಣ ಹಂತ | ನಿವೇಶನ ಲಭ್ಯತೆ | ನಿವೇಶನ ರಹಿತ |
|---|---|---|---|---|---|
| 1938 | 1669 | 269 | 196 | 47 | 26 |

ಮೇಲ್ಕಂಡಂತೆ ಬಾಡಿಗೆ/ ಬಾಡಿಗೆ ರಹಿತ ಕಟ್ಟಡಗಳಲ್ಲಿ ನಡೆಸುತ್ತಿರುವ 269 ವಿದ್ಯಾರ್ಥಿನಿಲಯಗಳ ಪೈಕಿ 196 ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತವೆ. 47 ವಿದ್ಯಾರ್ಥಿ ನಿಲಯಗಳಿಗೆ ನಿವೇಶನಗಳು ಲಭ್ಯವಿದ್ದು, ಪ್ರಸಕ್ತ ಸಾಲಿನಲ್ಲಿ ಅನುದಾನದ ಲಭ್ಯತೆಯನ್ನು ಆಧರಿಸಿ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು. ಬಾಕಿ 26 ವಿದ್ಯಾರ್ಥಿ ನಿಲಯಗಳಿಗೆ ಸೂಕ್ತ ನಿವೇಶನಗಳನ್ನು ಪಡೆಯುವುದು ಬಾಕಿ ಇದ್ದು, ಸೂಕ್ತ ನಿವೇಶನಗಳು ದೊರೆತ ನಂತರ, ಅನುದಾನದ ಲಭ್ಯತೆಯನ್ನು ಆಧರಿಸಿ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಒಟ್ಟು 874 ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, ವಸತಿ ಶಾಲೆ/ ಕಾಲೇಜುಗಳಿಗೆ 19860 ಬೋಧಕ, ಬೋಧಕೇತರ ಮತ್ತು ಗ್ರೂಪ್-ಡಿ ವೃಂದದ ಹುದ್ದೆಗಳು ಮಂಜೂರಾಗಿರುತ್ತವೆ. ಈ ಪೈಕಿ 8000 ಶಿಕ್ಷಕರ ಹುದ್ದೆಗಳು ಮಂಜೂರಾಗಿದ್ದು, ಪ್ರಸ್ತುತ 4519 ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. ಉಳಿದಂತೆ 3481 ಹುದ್ದೆಗಳು ಖಾಲಿ ಇರುತ್ತವೆ. ಖಾಲಿ ಇರುವ ಹುದ್ದೆಗಳ ಎದುರಾಗಿ ಜಿಲ್ಲಾ ಹಂತದಲ್ಲಿ ಅತಿಥಿ ಶಿಕ್ಷಕರು / ಹೊರಸಂಪನ್ಮೂಲ ಏಜೆನ್ಸಿ ಮೂಲಕ ಶಿಕ್ಷಕರನ್ನು ತಾತ್ಕಾಲಿಕವಾಗಿ ಪಡೆದು ವಸತಿ ಶಾಲೆಗಳನ್ನು ನಿರ್ವಹಿಸಲಾಗುತ್ತಿದೆ.

ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ 2756 ಹುದ್ದೆಗಳನ್ನು ಭರ್ತಿಮಾಡಲು ಆರ್ಥಿಕ ಇಲಾಖೆ ಯ ಸಹಮತಿ ಕೋರಲಾಗಿ, ಆರ್ಥಿಕ ಇಲಾಖೆಯು 875 ಬೋಧಕ/ಬೋಧಕೇತರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸಹಮತಿ ನೀಡಿರುತ್ತದೆ.

ಅದರಂತೆ, ಉಳಿಕೆ ಮೂಲ ವೃಂದದ 875 ಹುದೆಗಳ ಜೊತೆಗೆ ಕಲ್ಯಾಣ ಕರ್ನಾಟಕ ವೃಂದದ 780 ಹುದ್ದೆಗಳು ಸೇರಿದಂತೆ ಒಟ್ಟು 1655 ಬೋಧಕ/ ಬೋಧಕೇತರ ಹುದ್ದೆಗಳನ್ನು ನಿಯಮಾನುಸಾರ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ಮುಖಾಂತರ ನೇರನೇಮಕಾತಿಗೆ ಮಾಡುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.

**ಈ)** 2023-24, 2024-25 ಮತ್ತು 2025-26ನೇ ಸಾಲಿನಲ್ಲಿ ಹಾಸ್ಟೆಲ್‌ಗಳ ನಿರ್ವಹಣೆಗೆ ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗಿದೆ; ವಿದ್ಯಾರ್ಥಿಗಳಿಗೆ ವಸತಿ, ಊಟ ಹಾಗೂ ಇನ್ನಿತರ ಮೂಲಭೂತ ಅಗತ್ಯಗಳನ್ನು ಪೂರೈಸಲು ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗಿದೆ; ಉತ್ತರ ಕರ್ನಾಟಕದ ಹಾಸ್ಟೆಲ್‌ಗಳು ಕಳಪೆ ನಿರ್ವಹಣೆಯಿಂದ ಕೂಡಿರುವುದು ಸರ್ಕಾರದ ಗಮನಕ್ಕಿದೆಯೇ; (ವರ್ಷವಾರು ಸಂಪೂರ್ಣ ಮಾಹಿತಿ

2023-24, 2024-25 ಮತ್ತು 2025-26 ನೇ ಸಾಲಿನಲ್ಲಿ ವಿದ್ಯಾರ್ಥಿಗಳಿಗೆ ವಸತಿ ಊಟ ಹಾಗೂ ಇನ್ನಿತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಈ ಕೆಳಗಿನಂತೆ ವೆಚ್ಚ ಮಾಡಲಾಗಿದೆ. (ರೂ.ಕೋಟಿಗಳಲ್ಲಿ)

| ಕ್ರ. ಸಂ | ಲೆಕ್ಕಶೀರ್ಷಿಕೆ | 2023-24 | 2024-25 | 2025-26 |
|---|---|---|---|---|
| 01 | ಲೆಕ್ಕಶೀರ್ಷಿಕೆ : 2225-00-101-0-61 ಮೆಟ್ರಿಕ್ ಪೂರ್ವ ನಿರ್ವಹಣೆ | 394.20 | 490.51 | 485.51 |
| 02 | ಲೆಕ್ಕಶೀರ್ಷಿಕೆ : 2225-00-101-0-29 ಮೆಟ್ರಿಕ್ ನಂತರದ ನಿರ್ವಹಣೆ | 218.51 | 255.77 | 262.82 |

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಅಧೀನದ ವಸತಿ ಶಾಲೆ/ ಕಾಲೇಜುಗಳಿಗೆ 2023-24, 2024-25 ಮತ್ತು 2025-26ನೇ ಸಾಲಿನಲ್ಲಿ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಆಹಾರ, ಮೂಲಭೂತ ಸೌಲಭ್ಯಗಳು ಹಾಗೂ ಖಾಯಂ/ ಹೊರಸಂಪನ್ಮೂಲ ಸಿಬ್ಬಂದಿಗಳ ವೇತನ ಸೇರಿದಂತೆ ಕಳೆದ 03 ವರ್ಷಗಳಲ್ಲಿ ಖರ್ಚು ಮಾಡಲಾದ ವೆಚ್ಚದ ವಿವರ ಈ ಕೆಳಕಂಡಂತಿದೆ.

| ಕ್ರ.ಸಂ. | ವರ್ಷ | ಖರ್ಚು ಮಾಡಲಾದ ವೆಚ್ಚ (ರೂ. ಕೋಟಿಗಳಲ್ಲಿ) | | | ಒಟ್ಟು |
|---|---|---|---|---|---|
| | | ಪ.ಜಾತಿ | ಪ.ವರ್ಗ | ಹಿಂ.ವರ್ಗ | |
| 1 | 2023-24 | 891.29 | 297.63 | 277.61 | 1466.52 |
| 2 | 2024-25 | 1132.83 | 297.09 | 304.78 | 1734.70 |
| 3 | 2025-26 (31.10.2025 ರವರೆಗೆ) | 531.05 | 135.11 | 192.85 | 859.02 |

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ 2025-26ನೇ ಸಾಲಿನ ಆಯವ್ಯಯ ಘೋಷಣೆಯನ್ವಯ ಒಂದೇ ಬಾರಿಗೆ (One Time) ರೂ.213.00 ಕೋಟಿಗಳ ವೆಚ್ಚದಲ್ಲಿ 13 ವಿವಿಧ ಬಗೆಯ ಮೂಲಭೂತ ಸಾಮಗ್ರಿಗಳಾದ ಡೆಸ್ಕ್ ಕಮ್ ಬೆಂಚ್ 5 ಸೀಟರ್, ಟು ಟ್ಯೆರ್ ಕಾಟ್, ಹಾಸಿಗೆಗಳು, ದಿಂಬುಗಳು, ಬೆಡ್‌ಶೀಟ್, ಬೆಡ್‌ಸ್ಪ್ರೆಡ್, ತಟ್ಟೆ-ಲೋಟಗಳು, ಪಾತ್ರೆ ಪರಿಕರಗಳು (ಸೆಟ್‌ಗಳಲ್ಲಿ), ವಾಟರ್ ಪ್ಯೂರಿಫೈಯರ್, ಪಾಠೋಪಕರಣಗಳು, ನರ್ಸಿಂಗ್ ಕಿಟ್, ಗ್ರೈಂಡರ್, ಪ್ರಯೋಗಾಲಯ ಸಾಮಗ್ರಿಗಳು (ಸೆಟ್ ಗಳಲ್ಲಿ), ಪ್ರೊಜೆಕ್ಟರ್ ಮತ್ತು ಸ್ಕ್ರೀನ್ ಸೇರಿದಂತೆ ಒಟ್ಟು 13 ಬಗೆಯ ಸಾಮಗ್ರಿಗಳ ಪೈಕಿ ಕೆಲವು ಸಾಮಗ್ರಿಗಳಿಗೆ ಸರಬರಾಜು ಆದೇಶವನ್ನು ನೀಡಲಾಗಿದ್ದು, ಸರಬರಾಜು ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. ಇನ್ನು ಉಳಿದ ಕೆಲವು ಸಾಮಗ್ರಿಗಳಿಗೆ ಆಹ್ವಾನಿಸಲಾಗಿರುವ ಟೆಂಡರ್‌ಗಳ ಪ್ರಕ್ರಿಯೆಯು ಅಂತಿಮ ಹಂತದಲ್ಲಿರುತ್ತದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ರಾಜ್ಯದಾದ್ಯಂತ ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ

| | | |
|---|---|---|
| | | ಕಂದಾಯ ವಿಭಾಗಗಳಲ್ಲಿ 874 ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, ಸರ್ಕಾರದ ಆದೇಶ ಸಂಖ್ಯೆ:ಸಕಇ 208 ಎಂಡಿಎಸ್ 2025 ದಿನಾಂಕ:09.09.2025 ರಲ್ಲಿ ವಸತಿ ಶಾಲೆ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರತಿ ದಿನ ನೀಡಬೇಕಾದ ಬೆಳಗಿನ ಉಪಹಾರ, ಮಧ್ಯಾಹ್ನದ ಊಟ, ಸಂಜೆಯ ಲಘು ಫಲಹಾರ ಮತ್ತು ರಾತ್ರಿಯ ಊಟ ವಿವರಗಳನ್ನೊಳಗೊಂಡಂತೆ ಆಯಾಯಾ ಪ್ರದೇಶದಲ್ಲಿನ ಆಹಾರ ಪದ್ಧತಿಗಳನ್ವಯ ಪ್ರಾದೇಶಿಕವಾರು ಮೆನು ಚಾರ್ಟ್‌ನ್ನು ನಿಗಧಿಪಡಿಸಿ ಆದೇಶಿಸಲಾಗಿರುತ್ತದೆ.<br><br>ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿಗಳಿಗೆ ಸರ್ಕಾರ ನಿಗಧಿಪಡಿಸಿರುವ ಮೆನು ಚಾರ್ಟ್ ಪ್ರಕಾರ ಆಹಾರ ಗುಣಮಟ್ಟ ಹಾಗೂ ಪಾರದರ್ಶಕತೆಯನ್ನು ಖಾತರಿಪಡಿಸಿಕೊಳ್ಳಲು ವಸತಿ ಶಾಲೆ/ಕಾಲೇಜುಗಳ ಪ್ರಾಂಶುಪಾಲರು/ ನಿಲಯಪಾಲಕರು ಪ್ರತಿದಿನ 3 ಬಾರಿ X (formarly Twitter) ನಲ್ಲಿ ಆಹಾರ ಪದಾರ್ಥಗಳ ಛಾಯಾಚಿತ್ರವನ್ನು ಪೋಸ್ಟ್ ಮಾಡುವಂತೆ ಸೂಚಿಸಲಾಗಿದ್ದು, ಅದರಂತೆ ಎಲ್ಲಾ ವಸತಿ ಶಾಲೆ/ ಕಾಲೇಜುಗಳ ಪ್ರಾಂಶುಪಾಲರು/ ನಿಲಯಪಾಲಕರು X (formarly Twitter) ನಲ್ಲಿ ಆಹಾರ ಪದಾರ್ಥಗಳ ಛಾಯಾಚಿತ್ರವನ್ನು ಪೋಸ್ಟ್ ಮಾಡುತ್ತಿದ್ದಾರೆ.<br>ವಸತಿ ಶಾಲೆ/ಕಾಲೇಜುಗಳಲ್ಲಿ ಸಣ್ಣಪುಟ್ಟ (ನಲ್ಲಿ, ಬಲ್ಬ್ಸ್, ಇತ್ಯಾದಿ) ರಿಪೇರಿ ಕಾರ್ಯಗಳಿಗಾಗಿ ವಾರ್ಷಿಕ ಸ್ವಂತ ಕಟ್ಟಡದ ವಸತಿ ಶಾಲೆಗಳಿಗೆ ರೂ. 1.00 ಲಕ್ಷಗಳನ್ನು ಹಾಗೂ ಬಾಡಿಗೆ ಕಟ್ಟಡದ ವಸತಿ ಶಾಲೆಗಳಿಗೆ ರೂ.50,000/- ಗಳನ್ನು ವಸತಿ ಶಾಲೆಗಳ ನಿರ್ವಹಣಾ ಖಾತೆಗೆ ಬಿಡುಗಡೆ ಮಾಡಲಾಗುತ್ತಿದೆ. |
| **ಉ)** | ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಹಾಸಿಗೆ, ತಲೆದಿಂಬು, ಮಂಚ, ನೈರ್ಮಲ್ಯ, ಶೌಚಾಲಯ, ಸ್ನಾನಕ್ಕೆ ಬಿಸಿ ನೀರು, ಕುಡಿಯುವ ನೀರು, ಲೈಬ್ರರಿ, ಭದ್ರತೆ ಹಾಗೂ ಇನ್ನಿತರ ಸೌಲಭ್ಯಗಳ ಕೊರತೆಗಳ ಕುರಿತು ಹಲವು ಪತ್ರಿಕೆಗಳಲ್ಲಿ ವರದಿ ಪ್ರಸಾರವಾಗಿರುವುದು ಹಾಗೂ ಇಂತಹ ಸಮಸ್ಯೆಗಳ ಕುರಿತು ಹಾಸ್ಟೆಲ್‌ಗಳಲ್ಲಿರುವ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿರುವಂತಹ ಪ್ರಕರಣಗಳು ಬೆಳಕಿಗೆ ಬರುತ್ತಿರುವುದು ಸರ್ಕಾರದ ಗಮನಕ್ಕಿದೆಯೇ; ಹಾಗಿದ್ದಲ್ಲಿ ತೆಗೆದುಕೊಂಡಿರುವ ಕ್ರಮಗಳೇನು; | ಸಮಾಜ ಕಲ್ಯಾಣ ಇಲಾಖೆಯಿಂದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಸಂಬಂಧ ರಾಜ್ಯ ವಲಯದ ವಿದ್ಯಾರ್ಥಿ ನಿಲಯಗಳಿಗೆ ಅಗತ್ಯವಿರುವ ಸಾಮಗ್ರಿಗಳಾದ ಟೂ ಟಯರ್ ಕಾಟ್, ಸೋಲಾರ್ ವಾಟರ್ ಹೀಟರ್, ಡೈನಿಂಗ್ ಟೇಬಲ್, ಡೀಸೆಲ್ ಜನರೇಟರ್, ಕಾಯರ್ ಮ್ಯಾಟ್ರಸ್ ಮತ್ತು ಪಿಲ್ಲೋ, ಸಿಸಿಟಿವಿ ಕ್ಯಾಮರಾಗಳನ್ನು ಕೆಟಿಪಿಪಿ ನಿಯಮಾವಳಿಗಳನ್ವಯ ಇ-ಟೆಂಡರ್ ಮೂಲಕ ಖರೀದಿಸಿ ಪೂರೈಸಲಾಗುತ್ತಿದೆ.<br>ವಿದ್ಯಾರ್ಥಿ ನಿಲಯಗಳಲ್ಲಿ ಅಗತ್ಯವಿರುವ ಇತರೆ ಮೂಲಭೂತ ಸಾಮಗ್ರಿಗಳಾದ ಯುಪಿಎಸ್, ವಾಟಪ್ಯೂರಿಫೈರ್, ಲೈಬ್ರರಿ ಬುಕ್ಸ್, ಕ್ರೀಡಾ ಸಾಮಗ್ರಿಗಳು, ಇನ್ಸಿನೇಟರ್, ಬೆಂಕಿ ನಂದಿಸುವ ಉಪಕರಣ, ಪಾತ್ರೆ ಪರಿಕರಗಳು ಹಾಗೂ ಇತರೆ ತುರ್ತು ಸಾಮಗ್ರಿಗಳ ಖರೀದಿಗಾಗಿ ಜಿಲ್ಲಾ ಮಟ್ಟಗಳಲ್ಲಿ ಅನುಷ್ಠಾನಗೊಳಿಸಲು ಅನುದಾನವನ್ನು ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ. ವಿದ್ಯಾರ್ಥಿ ನಿಲಯಗಳ ಸಮರ್ಪಕ ನಿರ್ವಹಣೆ ಸಂಬಂಧ ಕೈಗೊಳ್ಳಲಾಗಿರುವ ಕ್ರಮಗಳ ಕುರಿತು ವಿವರವನ್ನು ಅನುಬಂಧ -1 & 2ರಲ್ಲಿ ನೀಡಲಾಗಿದೆ.<br>ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ 2025-26ನೇ ಸಾಲಿನ ಆಯವ್ಯಯ ಘೋಷಣೆಯನ್ವಯ ಒಂದೇ ಬಾರಿಗೆ (One Time) ರೂ.213.00 ಕೋಟಿಗಳ ವೆಚ್ಚದಲ್ಲಿ 13 ವಿವಿಧ ಬಗೆಯ ಮೂಲಭೂತ ಸಾಮಗ್ರಿಗಳಾದ ಡೆಸ್ಕ್ ಕಮ್ ಬೆಂಚ್ 5 ಸೀಟರ್, ಟು ಟ್ರೈರ್ ಕಾಟ್, ಹಾಸಿಗೆಗಳು, ದಿಂಬುಗಳು, ಬೆಡ್‌ಶೀಟ್, ಬೆಡ್‌ಸ್ಪ್ರೆಡ್, ತಟ್ಟೆ-ಲೋಟಗಳು, ಪಾತ್ರೆ ಪರಿಕರಗಳು (ಸೆಟ್‌ಗಳಲ್ಲಿ), ವಾಟರ್ ಪ್ಯೂರಿಫೈಯರ್, ಪಾಠೋಪಕರಣಗಳು, ನರ್ಸಿಂಗ್ |

| | | |
|---|---|---|
| | | ಕಿಟ್, ಗ್ರೈಂಡರ್, ಪ್ರಯೋಗಾಲಯ ಸಾಮಗ್ರಿಗಳು (ಸೆಟ್ ಗಳಲ್ಲಿ), ಪ್ರೊಜೆಕ್ಟರ್ ಮತ್ತು ಸ್ಕ್ರೀನ್ ಸೇರಿದಂತೆ ಒಟ್ಟು 13 ಬಗೆಯ ಸಾಮಗ್ರಿಗಳ ಪೈಕಿ ಕೆಲವು ಸಾಮಗ್ರಿಗಳಿಗೆ ಸರಬರಾಜು ಆದೇಶವನ್ನು ನೀಡಲಾಗಿದ್ದು, ಸರಬರಾಜು ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. ಇನ್ನು ಉಳಿದ ಕೆಲವು ಸಾಮಗ್ರಿಗಳಿಗೆ ಆಹ್ವಾನಿಸಲಾಗಿರುವ ಟೆಂಡರ್‌ಗಳ ಪ್ರಕ್ರಿಯೆಯು ಅಂತಿಮ ಹಂತದಲ್ಲಿರುತ್ತದೆ. |
| **ಟ** | ಕಳೆದ 3 ವರ್ಷಗಳಲ್ಲಿ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು ನೀಡುವ ಶುಚಿತ್ವ ಕಿಟ್‌ಗಳನ್ನು ಸರಿಯಾದ ಸಮಯದಲ್ಲಿ ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ತೆಗೆದುಕೊಂಡ ಕ್ರಮಗಳೇನು; ವಿಳಂಬಕ್ಕೆ ಕಾರಣಗಳೇನು; ಒಂದು ವೇಳೆ ವಿತರಿಸುವ ಹಂತದಲ್ಲಿದ್ದರೆ ಯಾವ ಸಮಯದಿಂದ ಕಿಟ್ಗಳನ್ನು ವಿತರಿಸಲಾಗುತ್ತದೆ? (ಸಂಪೂರ್ಣ ಮಾಹಿತಿ ನೀಡುವುದು) | ಕಳೆದ 03 ವರ್ಷಗಳಲ್ಲಿ ಸರ್ಕಾರದ ಆದೇಶಾನುಸಾರ ಇಲಾಖೆಯ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಶುಚಿ ಸಂಭ್ರಮ ಕಿಟ್‌ಗಳನ್ನು ಮಾಹೆಯಾನ ರೂ.171/-ಗಳ ವೆಚ್ಚದಲ್ಲಿ ಹಾಗೂ ಸಿರಿಗಂಧದ ಕಿಟ್‌ಗಳನ್ನು ರೂ.230/-ಗಳ ವೆಚ್ಚದಲ್ಲಿ ಕೆಟಿಪಿಪಿ ಅಧಿನಿಯಮ 1999ರ ಕಲಂ 4(ಜಿ) ರಡಿ ವಿನಾಯಿತಿ ಹೊಂದಿರುವ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ ಬೆಂಗಳೂರು ರವರಿಂದ ಖರೀದಿಸಿ ಪೂರೈಸಲಾಗುತ್ತಿದೆ. ಬಾಲಕರಿಗೆ ನಿರ್ಮಲ್ ಕಿಟ್ ಮತ್ತು ಬಾಲಕಿಯರಿಗೆ ಸ್ಫೂರ್ತಿ ಕಿಟ್‌ಗಳನ್ನು ಸರಬರಾಜು ಮಾಡುವಂತೆ ದಿನಾಂಕ:29.08.2025 ರಂದು ಮೆ\|\|ಕರ್ನಾಟಕ ಸೋಪ್ಸ್ ಅಂಡ್ ಡಿಟರ್ಜೆಂಟ್ ಲಿಮಿಟೆಡ್ ರವರಿಗೆ ಆದೇಶ ನೀಡಲಾಗಿದ್ದು, ಸರಬರಾಜು ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |

ಸಕಇ/275/ಎಂಡಿಎಸ್/2025

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) ರವರ ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ:640ಕ್ಕೆ ಅನುಬಂಧ - 1

| ಕ್ರ.ಸಂ | ಜಿಲ್ಲೆಯ ಹೆಸರು | ಬಾಡಿಗೆ ಕಟ್ಟಡಗಳ ಸಂಖ್ಯೆ | ಮಾಹೆಯಾನ ಬಾಡಿಗೆ | ವಾರ್ಷಿಕ ಬಾಡಿಗೆ |
|---|---|---|---|---|
| 1 | ಶಿವಮೊಗ್ಗ | 14 | 12,32,080 | 1,47,84,960 |
| 2 | ಚಿತ್ರದುರ್ಗ | 15 | 4,57,500 | 54,90,000 |
| 3 | ಉಡುಪಿ | 3 | 2,15,000 | 25,80,000 |
| 4 | ಉತ್ತರ ಕನ್ನಡ | 7 | 87,300 | 10,47,600 |
| 5 | ಕಲಬುರ್ಗಿ | 9 | 8,87,086 | 1,06,45,032 |
| 6 | ಕೊಡಗು | 6 | 57,340 | 6,88,080 |
| 7 | ಕೊಪ್ಪಳ | 5 | 4,94,588 | 59,35,056 |
| 8 | ಕೋಲಾರ | 8 | 2,52,415 | 30,28,980 |
| 9 | ಗದಗ | 8 | 9,03,150 | 1,08,37,800 |
| 10 | ಚಾಮರಾಜನಗರ | 4 | 26,500 | 3,18,000 |
| 11 | ಚಿಕ್ಕಬಳ್ಳಾಪುರ | 2 | 1,13,880 | 13,66,560 |
| 12 | ಚಿಕ್ಕಮಗಳೂರು | 5 | 86,400 | 10,36,800 |
| 13 | ತುಮಕೂರು | 11 | 6,01,940 | 72,23,280 |
| 14 | ದಕ್ಷಿಣ ಕನ್ನಡ | 7 | 5,98,000 | 71,76,000 |
| 15 | ದಾವಣಗೆರೆ | 10 | 13,97,070 | 1,67,64,840 |
| 16 | ಧಾರವಾಡ | 11 | 13,65,398 | 1,63,84,776 |
| 17 | ಬಳ್ಳಾರಿ | 8 | 9,37,937 | 1,12,55,244 |
| 18 | ಬಾಗಲಕೋಟೆ | 16 | 5,50,626 | 66,07,512 |
| 19 | ಬೀದರ್ | 4 | 1,73,900 | 20,86,800 |
| 20 | ಬೆಂಗಳೂರು ಗ್ರಾಮಾಂತರ | 2 | 1,55,607 | 18,67,284 |
| 21 | ಬೆಂಗಳೂರು ದಕ್ಷಿಣ | 7 | 2,21,459 | 26,57,508 |
| 22 | ಬೆಂಗಳೂರು ನಗರ | 10 | 18,25,562 | 2,19,06,744 |
| 23 | ಬೆಳಗಾವಿ | 12 | 7,30,480 | 87,65,760 |
| 24 | ಮಂಡ್ಯ | 9 | 5,04,900 | 60,58,800 |
| 25 | ಮೈಸೂರು | 11 | 23,74,271 | 2,84,91,252 |
| 26 | ಯಾದಗಿರಿ | 2 | 2,79,035 | 33,48,420 |
| 27 | ರಾಯಚೂರು | 23 | 18,13,352 | 2,17,60,224 |
| 28 | ವಿಜಯನಗರ | 6 | 3,72,200 | 44,66,400 |
| 29 | ವಿಜಯಪುರ | 13 | 12,97,807 | 1,55,73,684 |
| 30 | ಹಾವೇರಿ | 8 | 6,52,810 | 78,33,720 |
| 31 | ಹಾಸನ | 13 | 11,13,400 | 1,33,60,800 |
| | **ಒಟ್ಟು :** | **269** | **2,17,78,993** | **26,13,47,916** |

ಆಯುಕ್ತರ ಪರವಾಗಿ
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) ರವರ ಚುಕ್ಕೆಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ: 640 (697)ಕ್ಕೆ ಅನುಬಂಧ - 2**

- ಇಲಾಖೆಯ ಸರ್ಕಾರಿ ವಸತಿ ಶಾಲೆ ಮತ್ತು ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಊಟೋಪಚಾರವನ್ನು ನೀಡಲು ಮೂರು ವಿಭಾಗವಾರು (ಕರಾವಳಿ, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ) ಪರಿಷ್ಕೃತ ಮೆನು ಚಾರ್ಟ್ ನಂತೆ ವಿದ್ಯಾರ್ಥಿಗಳಿಗೆ ಊಟೋಪಚಾರವನ್ನು ನೀಡಲಾಗುತ್ತಿದೆ.
- ಸರ್ಕಾರದ ಆದೇಶ ಸಂಖ್ಯೆ: ಸಕಇ 55 ಪಕವಿ 2023 ಬೆಂಗಳೂರು ದಿ: 05-05-2023 ರಲ್ಲಿ ಪ್ರತಿ ನಿಲಯದಲ್ಲಿ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿಯೇ Mess Committee ಅನ್ನು ರಚಿಸಿ, ಗುಣಮಟ್ಟ ಕಾಯ್ದುಕೊಳ್ಳಲಾಗಿರುತ್ತದೆ. ಹಾಗೂ ವಿದ್ಯಾರ್ಥಿನಿಲಯಗಳಲ್ಲಿನ ಶೌಚಾಲಯ ಸ್ವಚ್ಛತೆ ಹಾಗೂ ನೈರ್ಮಲ್ಯದ ಕುರಿತಾಗಿ Sanitation committee ಯನ್ನು ರಚಿಸಲಾಗಿರುತ್ತದೆ.
- ಈ ಕಛೇರಿ ಆದೇಶ ಸಂಖ್ಯೆ:ಸಕನಿ/ಇಡಿ-4/2022-23, ದಿನಾಂಕ:08-01-2024 ರಲ್ಲಿ ಇಲಾಖೆಯ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳಿಗೆ ಶುಚಿ ರುಚಿಯಾದ ಮತ್ತು ಪೌಷ್ಟಿಕ ಆಹಾರವನ್ನು ನೀಡುವ ಕುರಿತು ಹಾಗೂ ವಿದ್ಯಾರ್ಥಿನಿಲಯಗಳ ಸಮರ್ಪಕ ನಿರ್ವಹಣೆ ಮಾಡಲು ಜಿಲ್ಲಾಮಟ್ಟಗಳಲ್ಲಿ ವಾರ್ಡನ್, ಅಡುಗೆಯವರು ಮತ್ತು ಅಡುಗೆ ಸಹಾಯಕರು ಹಾಗೂ ರಾತ್ರಿ ಕಾವಲುಗಾರರು (ಹೊರಸಂಪನ್ಮೂಲ ನೌಕರರು ಸೇರಿದಂತೆ)ಗಳಿಗೆ ಸ್ವಚ್ಛತೆ ಹಾಗೂ ರುಚಿಯಾದ ಅಡುಗೆ ತಯಾರಿಸುವ ಕುರಿತಂತೆ ತರಬೇತಿ ಕಾರ್ಯಾಗಾರವನ್ನು ಏರ್ಪಡಿಸಲಾಗಿರುತ್ತದೆ. ಈ ಸಂಬಂಧ ಪ್ರತಿ ಜಿಲ್ಲೆಗೆ ರೂ.50,000/-ಗಳಂತೆ ಒಟ್ಟು 31 ಜಿಲ್ಲೆಗಳಿಗೆ ಅನುದಾನ ಬಿಡುಗಡೆ ಮಾಡಿ ಆದೇಶಿಸಲಾಗಿದೆ.
- ಈ ಕಛೇರಿ ಆದೇಶ ಸಂಖ್ಯೆ:ಸಕನಿ/ಇಡಿ-4/938298/2022-23ರಲ್ಲಿ ಇಲಾಖೆಯ ಸರ್ಕಾರಿ ವಸತಿ ಶಾಲೆ ಮತ್ತು ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಶುಚಿತ್ವ ಹಾಗೂ ನೈರ್ಮಲ್ಯ ಮತ್ತು ರುಚಿಯಾದ ಊಟ-ತಿಂಡಿ ತಯಾರಿಸುವ ಕುರಿತು International institute of Hotel Management Bangalore ರವರಿಂದ ಬೆಂಗಳೂರು ವಿಭಾಗದ ಎಲ್ಲಾ ಜಿಲ್ಲೆಗಳಲ್ಲಿ ತರಬೇತಿ ನೀಡಲಾಗಿದ್ದು, ಉಳಿದ ಎಲ್ಲಾ ಜಿಲ್ಲೆಗಳಿಗೂ ಇದೇ ಮಾದರಿ ಪ್ರತಿಷ್ಠಿತ ಸಂಸ್ಥೆಗಳಿಂದ ತರಬೇತಿ ನೀಡಲಾಗಿರುತ್ತದೆ.

- ಸರ್ಕಾರದ ಆದೇಶ ಸಂಖ್ಯೆ: ಸಕಇ 738 ಪಕವಿ 2024, ದಿನಾಂಕ: 30-10-2024ರಲ್ಲಿ ಇಲಾಖೆಯ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಆಹಾರ ಪದಾರ್ಥ ಮತ್ತು ಇತರೆ ಸಾಮಗ್ರಿಗಳನ್ನು ಸರಬರಾಜು ಮಾಡಲು 2024-25ನೇ ಸಾಲಿನಿಂದ ಜಿಲ್ಲಾಮಟ್ಟದಲ್ಲಿ ಪ್ರತಿ ಜಿಲ್ಲೆಯನ್ನು ಘಟಕವನ್ನಾಗಿಸಿ ಪ್ರತಿ 02 ವರ್ಷಗಳಿಗೊಮ್ಮೆ ಕಡ್ಡಾಯವಾಗಿ ಟೆಂಡರ್ ಕರೆಯುವಂತೆ ಪರಿಷ್ಕೃತ ಮಾರ್ಗಸೂಚಿಯನ್ನು ಹೊರಡಿಸಿ ಆದೇಶಿಸಿದೆ.
- ಸರ್ಕಾರದ ಆದೇಶ ಸಂಖ್ಯೆ: ಸಕಇ 97 ಪಕವಿ 2023, ದಿನಾಂಕ : 28-07-2023ರಲ್ಲಿ ಟೆಂಡರ್ ಮೂಲಕ ಪಡೆಯಲಾಗುವ ಆಹಾರ ಸಾಮಾಗ್ರಿಗಳ ಗುಣಮಟ್ಟ ಕಾಯ್ದುಕೊಳ್ಳುವಂತೆಯೂ ಹಾಗೂ Freak Rate ನಮೂದಿಸುವ ಗುತ್ತಿಗೆದಾರರ ಬಿಡ್ ಅನ್ನು ನಿಯಮಾನುಸಾರ ತಿರಸ್ಕರಿಸುವಂತೆ ಸೂಚಿಸಲಾಗಿರುತ್ತದೆ.
- ಸರ್ಕಾರದ ಆದೇಶ ಸಂಖ್ಯೆ:ಸಕಇ 260 ಎಂಡಿಎಸ್ 2024, ದಿನಾಂಕ:06-01-2025 ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಸತಿ ಶಾಲಾ / ಕಾಲೇಜುಗಳು ಮತ್ತು ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಮೆನು ಪ್ರಕಾರ ಸಕಾಲದಲ್ಲಿ ಊಟದ ಗುಣಮಟ್ಟ ಮತ್ತು ಸ್ಥಿರತೆಯ ಬಗ್ಗೆ ಪಾರದರ್ಶಕತೆ ಮತ್ತು ಸಾರ್ವಜನಿಕ ಜಾಗೃತಿಯನ್ನು ಖಚಿತಪಡಿಸಿಕೊಳ್ಳಲು ಬೆಳಗಿನ ಉಪಹಾರ, ಮಧ್ಯಾಹ ಮತ್ತು ರಾತ್ರಿ ಊಟಕ ದೈನಂದಿನ ಪೋಟೋಗಳನ್ನು X (Formaly Twitter) ನಲ್ಲಿ Post ಮಾಡಲು ಮಾರ್ಗಸೂಚಿಗಳನ್ನು ಹೊರಡಿಸಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ಇಲಾಖಾ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಿ ಆದೇಶಿಸಿದೆ.
- ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: SWD 198 RI 2022, ದಿನಾಂಕ: 18-02-2025 ರನ್ವಯ ಪ್ರತಿ ಜಿಲ್ಲೆಗೆ ರಾಜ್ಯ ಮಟ್ಟದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನಿಯೋಜನೆ ಆದೇಶಿಸಲಾಗಿರುತ್ತದೆ.
- ಸರ್ಕಾರದ ಆದೇಶ ಸಂಖ್ಯೆ SWD/EDU/ED4/80/2023 C-1161067 ದಿನಾಂಕ:15-09-2023 ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಿದ್ಯಾರ್ಥಿ ನಿಲಯಗಳಿಗೆ ಉಪ ವಿಭಾಗಾಧಿಕಾರಿಗಳು ಪ್ರತಿ ಮಾಹೆಯಲ್ಲಿ ಕನಿಷ್ಠ ಒಂದು ಬಾರಿ ಹಾಗೂ ತಾಲ್ಲೂಕಿನ ತಹಶಿಲ್ದಾರ್‌ರು ಪ್ರತಿ ಮಾಹೆಯಲ್ಲಿ ಕನಿಷ್ಠ 2 ಬಾರಿ ಅನಿರೀಕ್ಷಿತ ಬೇಟಿ ನೀಡಿ ವರದಿ ಮಾಡುವಂತೆ ಆದೇಶಿಸಿದೆ.
- ಈ ಕಛೇರಿ ಸುತ್ತೋಲೆ ಸಂಖ್ಯೆ: SWD/ SCHC/ SC/ 23/ 2023/ 1184131) ದಿನಾಂಕ: 19-09-2023 ರಲ್ಲಿ ಇಲಾಖೆಯ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಸಿದ್ಧಪಡಿಸಲಾಗುತ್ತಿರುವ ಆಹಾರದ ಗುಣಮಟ್ಟ

ಕಾಯ್ದುಕೊಳ್ಳುವ ಸಂಬಂಧ Taste Register (ರುಚಿ ಪರಿಶೀಲನಾ ವಹಿ)ಯನ್ನು ನಿರ್ವಹಿಸುವಂತೆ ಸೂಚಿಸಿದೆ.

- ಸಮಾಜ ಕಲ್ಯಾಣ ಇಲಾಖೆಯ ಸುತ್ತೋಲೆ ಸಂಖ್ಯೆ:SWD/EDU/ED7/20/2023/1065640 ದಿನಾಂಕ:07-10-2023ರಲ್ಲಿ ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವಿದ್ಯಾರ್ಥಿನಿಲಯ ಹಾಗೂ ವಸತಿ ಶಾಲೆಗಳಿಗೆ ಮಾಹೆಯಾನ ಸರಬರಾಜು ಆಗುತ್ತಿರುವ ಆಹಾರ ಪದಾರ್ಥಗಳ ಸಂಬಂಧ, ಪ್ರತಿ ಮಾಹೆ ಸರಬರಾಜು ಆಗುತ್ತಿರುವ ಆಹಾರ ಪದಾರ್ಥಗಳ ಮಾದರಿಯನ್ನು ಸಂರಕ್ಷಿಸುವ ಬಗ್ಗೆ ಕ್ರಮವಹಿಸಲಾಗಿದೆ. ಹಾಗೂ ಮಾಹೆಯಾನ ಸರಬರಾಜಾಗುತ್ತಿರುವ ಆಹಾರ ಪದಾರ್ಥಗಳ ಸಂಬಂಧ, ಪ್ರತಿ ಮಾಹೆ ಸರಬರಾಜಾಗುತ್ತಿರುವ ಆಹಾರ ಪದಾರ್ಥಗಳ ಮಾದರಿಗಳನ್ನು ಪಡೆದು ಸಂರಕ್ಷಿಸಿಡುವ ಬಗ್ಗೆ ಹೊರಡಿಸಲಾಗಿರುವ ಎಲ್ಲಾ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಿ, ಇಲಾಖಾ ವ್ಯಾಪ್ತಿಯ ನಿಲಯಗಳಿಗೆ ಉತ್ತಮ ಗುಣಮಟ್ಟದ ಆಹಾರ ಸಾಮಗ್ರಿಗಳು ಸರಬರಾಜು ಆಗುವಂತೆ ನೋಡಿಕೊಳ್ಳುವುದು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಹಾಗೂ ತಾಲ್ಲೂಕು ಅಧಿಕಾರಿಗಳ ಜವಾಬ್ದಾರಿಯಾಗಿರುತ್ತದೆ. ಒಂದು ವೇಳೆ ಸದರಿ ಮಾರ್ಗಸೂಚಿಗಳನ್ನು ಉಲ್ಲಂಘಿಸಿದಲ್ಲಿ ಸಂಬಂಧಪಟ್ಟ ಜಿಲ್ಲೆಯ ಜಂಟಿ / ಉಪನಿರ್ದೇಶಕರು ಹಾಗೂ ತಾಲ್ಲೂಕು ಮಟ್ಟದ ಸಹಾಯಕ ನಿರ್ದೇಶಕರ ಮೇಲೆ ಶಿಸ್ತು ಕ್ರಮ ತೆಗೆದುಕೊಳ್ಳಲಾಗುವುದು.
- ಸರ್ಕಾರದ ಆದೇಶ ಸಂಖ್ಯೆ:ಸಕಇ 914 ಪಕವಿ 2024, ದಿನಾಂಕ:02-01-2025 ರಲ್ಲಿ ಇಲಾಖೆಯ ವಿದ್ಯಾರ್ಥಿನಿಲಯಗಳನ್ನು ಸಮರ್ಪಕ ಕಾರ್ಯ ನಿರ್ವಹಣೆಗೆ ಬೆಂಬಲ ಹಾಗೂ ಮಾರ್ಗದರ್ಶನವನ್ನು ನೀಡುವ ಸಲುವಾಗಿ ತಾಲ್ಲೂಕಿನ ಶಾಲೆಗಳ ಮುಖ್ಯೋಪಾದ್ಯಾಯರು, ಗ್ರಾಮಪಂಚಾಯತ್ PDO, ಪುರಸಭೆ / ನಗರ ಸಭೆ ಮುಖ್ಯಾಧಿಕಾರಿಗಳು, ಕ್ಲಸ್ಟರ್ ಸಂಪನ್ಮೂಲಾಧಿಕಾರಿ ಮತ್ತು ತಾಲ್ಲೂಕು / ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರ ಸದಸ್ಯರುಗಳು ಸೇರಿದಂತೆ ಪ್ರತಿ ವಿದ್ಯಾರ್ಥಿನಿಲಯದಲ್ಲಿ **"ವಿದ್ಯಾರ್ಥಿನಿಲಯ ನಿರ್ವಹಣಾ ಸಮಿತಿ" ಯನ್ನು** ರಚಿಸಿ ಆದೇಶಿಸಿದೆ.
- ಈ ಕಛೇರಿ ಆದೇಶ ಸಂಖ್ಯೆ: ಸಕನಿ/ಇಡಿ-4/ಸಿಆರ್- 1691549/2024-25 ದಿನಾಂಕ:28-10-2025ರಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ವಿದ್ಯಾರ್ಥಿಗಳಿಗೆ ಪೌಷ್ಠಿಕಾಂಶ ಪುಡಿಯನ್ನು (Nutrition Powder) ನೀಡಲಾಗುತ್ತಿದೆ.
- ಸರ್ಕಾರದ ಆದೇಶ ಸಂಖ್ಯೆ:ಸಕಇ 287 ಪಕವಿ 2024, ದಿನಾಂಕ:28-11-2024ರಲ್ಲಿ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ನಿಲಯಾರ್ಥಿಗಳಿಗೆ ಹೆಚ್ಚುವರಿಯಾದ ರೂ.100/-ಗಳಲ್ಲಿ ವಾರದಲ್ಲಿ 04 ದಿನ ತಲಾ ಒಂದು ಮೊಟ್ಟೆಯಂತೆ ಪ್ರತಿ ನಿಲಯಾರ್ಥಿಗಳಿಗೆ ವಿತರಿಸಲು ಆದೇಶಿಸಿದೆ.

- ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಸಂಬಂಧ ರಾಜ್ಯವಲಯದಿಂದ ನಿಲಯಗಳಿಗೆ ಅಗತ್ಯವಿರುವ ಸಾಮಗ್ರಿಗಳಾದ ಟೂ ಟಯರ್ ಕಾಟ್, ಸೋಲಾರ್ ವಾಟರ್ ಹೀಟರ್, ಡೈನಿಂಗ್ ಟೇಬಲ್, ಡೀಸೆಲ್ ಜನರೇಟರ್, ಕಾಯರ್ ಮ್ಯಾಟ್ರಸ್ ಮತ್ತು ಪಿಲ್ಲೋ, ಸಿಸಿಟಿವಿ ಕ್ಯಾಮರಾಗಳನ್ನು ಕೆಟಿಪಿಪಿ ನಿಯಮಾವಳಿಗಳನ್ವಯ ಇ-ಟೆಂಡರ್ ಮೂಲಕ ಖರೀದಿಸಿ ಪೂರೈಸಲಾಗುತ್ತಿದೆ.
- ವಿದ್ಯಾರ್ಥಿ ನಿಲಯಗಳಲ್ಲಿ ಅಗತ್ಯವಿರುವ ಇತರ ಮೂಲಭೂತ ಸಾಮಗ್ರಿಗಳಾದ ಯುಪಿಎಸ್, ವಾಟರ್ ಪ್ಯೂರಿಫೈರ್, ಲೈಬ್ರರಿ ಬುಕ್ಸ್, ಕ್ರೀಡಾ ಸಾಮಗ್ರಿಗಳು, ಇನ್ಸಿನೇಟರ್, ಬೆಂಕಿ ನಂದಿಸುವ ಉಪಕರಣ, ಪಾತ್ರೆ ಪರಿಕರಗಳು ಹಾಗೂ ಇತರ ತುರ್ತು ಸಾಮಗ್ರಿಗಳ ಖರೀದಿಗಾಗಿ ಜಿಲ್ಲಾ ಮಟ್ಟಗಳಲ್ಲಿ ಅನುಷ್ಠಾನಗೊಳಿಸಲು ಅನುದಾನವನ್ನು ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ.

**ಕೊಠಡಿ ಹಾಗೂ ಶೌಚಾಲಯ:** ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿ ವಾಸದ ಕೊಠಡಿ, ಶೌಚಾಲಯ, ಸ್ನಾನಗೃಹಗಳನ್ನು ನಿರ್ಮಾಣ ಹಾಗೂ ಅಗತ್ಯ ದುರಸ್ಥಿ/ಉನ್ನತೀಕರಣ ಕಾಮಗಾರಿಗಳನ್ನು ಕೈಗೊಳ್ಳುವ ಸಂಬಂಧವಾಗಿ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಮೂಲಕ ಸೂಕ್ತ ಪ್ರಸ್ತಾವನೆ ಪಡೆದು ಅನುದಾನ ಲಭ್ಯತೆಯನ್ನು ಆಧರಿಸಿ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮ ವಹಿಸಲಾಗುತ್ತಿದೆ.

ಒಟ್ಟಾರೆಯಾಗಿ ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ ಹಾಗೂ ವಿದ್ಯಾರ್ಥಿ ನಿಲಯಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವ ಬಗ್ಗೆ ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ ದಾಖಲಾಗುವ ವಿದ್ಯಾರ್ಥಿಗಳಿಗೆ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಎಲ್ಲಾ ರೀತಿಯ ಅಗತ್ಯ ಕ್ರಮಕೈಗೊಳ್ಳಲಾಗಿದೆ.

10/12/2

ಆಯುಕ್ತರ ಪರವಾಗಿ,
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.